## 58. ಕೈಗಾರಿಕಾ ಕಾಯ್ದೆ ತಿದ್ದುಪಡಿ ಸುಗ್ರೀವಾಜ್ಞೆಗೆ ರಾಜ್ಯಪಾಲರ ಅಂಕಿತ

ಕಾರ್ಮಿಕ ಸಂಘಟನೆಗಳ ತೀವ್ರ ವಿರೋಧದ ನಡುವೆಯೂ ಕಾರ್ಮಿಕ ಕಾನೂನುಗಳಾದ ಕೈಗಾರಿಕೆ ಕಾಯ್ದೆ, ಕೈಗಾರಿಕೆ ವಿವಾದ ಕಾಯ್ದೆ ಮತ್ತು ಗುತ್ತಿಗೆ ಕಾರ್ಮಿಕ ಕಾಯ್ದೆಗಳಿಗೆ ತಿದ್ದುಪಡಿ ತಂದು ರಾಜ್ಯ ಸರ್ಕಾರ ಹೊರಡಿಸಿದ್ದ ಸುಗ್ರೀವಾಜ್ಞೆಗೆ ರಾಜ್ಯಪಾಲ ವಜುಭಾಯಿ ವಾಲಾ ಅವರು ಅಂಕಿತ ಹಾಕಿದ್ದಾರೆ.

ಇತ್ತೀಚೆಗೆ ಸಚಿವ ಸಂಪುಟ ಸಭೆಯಲ್ಲಿ ಕೈಗಾರಿಕಾ ವಿವಾದ ಕಾಯ್ದೆಯ ಸೆಕ್ಷನ್ 25(ಕೆ) ತಿದ್ದುಪಡಿ ತಂದಿದ್ದು, ಕಾರ್ಖಾನೆಯ ಕಾರ್ಮಿಕರ ಮಿತಿಯನ್ನು 100 ರಿಂದ 300ಕ್ಕೆ ಹೆಚ್ಚಿಸಲಾಗಿದೆ. ಕಾರ್ಖಾನೆಗಳ ಕಾಯ್ದೆಯ ಸೆಕ್ಷನ್ 65(3)ಅಡಿಯಲ್ಲಿ ಯಾವುದೇ ತ್ರೈಮಾಸಿಕ ಅಧಿಕಾವಧಿ ಕೆಲಸವನ್ನು (ಒ.ಟಿ) 75ರಿಂದ 125 ಗಂಟೆಯವರೆಗೆ ಹೆಚ್ಚಿಸಲಾಗಿದೆ. ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ಕಾಯಿದೆ ತಿದ್ದುಪಡಿಗೆ ಸರ್ಕಾರ ಹೊರಡಿಸಿದ್ದ ಸುಗ್ರೀವಾಜ್ಞೆಗೆ ರಾಜ್ಯಪಾಲರು ಅಂಕಿತ ಹಾಕಿದ್ದಾರೆ.

ಆಧಾರ:ಕನ್ನಡಪ್ರಭ, ದಿನಾಂಕ:01.08.2020